# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

## ಗುರುವಾರ, ದಿನಾಂಕ: 16ನೇ ಫೆಬ್ರವರಿ, 2023
## (ಸಮಯ: ಬೆಳಗ್ಗೆ: 11.00 ಗಂಟೆಗೆ)

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

**ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಜಂಟಿ ಸದನ ಸಮಿತಿ) ಅವರು:-**

"ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿಯನ್ನು ನೀಡಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 12 ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು".

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

"2023ನೇ ಫೆಬ್ರವರಿ, 10ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಶಾಸಕರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಶಾಸಕರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:13.02.2023ರಂದು **ಡಾ॥ ತೇಜಸ್ವಿನಿ ಗೌಡ** ರವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ.

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರಾಶ್ರಿತರಿಗೆ ಪುನರ್ ವಸತಿ ಕಲ್ಪಿಸುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

02. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನ ಅಂಗಡಿ ಪೇಟೆಯ ಮಾರುಕಟ್ಟೆ ಸುತ್ತಮುತ್ತ ತೆರೆದ ಚರಂಡಿ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆ ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

03. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರು/ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ವಯೋಮಿತಿ ಹೆಚ್ಚಿಸುವಲ್ಲಿ ಉಂಟಾಗಿರುವ ತಾರತಮ್ಯದ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

04. **ಶ್ರೀ ಯು.ಬಿ.ವೆಂಕಟೇಶ್** ಅವರು ಉಡುಪಿ ಜಿಲ್ಲೆ, ಕಾಪು ತಾಲ್ಲೂಕು ಎಲ್ಲೂರಿನ ಮಹತೋಭಾರ ಶ್ರೀ ವಿಶ್ವೇಶ್ವರ ದೇವಸ್ಥಾನದಲ್ಲಿ ಪುರಾತನ ರೀತಿ ರಿವಾಜುಗಳು, ಸಂಪ್ರದಾಯ ಮತ್ತು ಆಚರಣಾ ಪದ್ಧತಿಗಳನ್ನು ಕೈಬಿಟ್ಟಿರುವ ಕುರಿತು ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

05. **ಶ್ರೀ ಮರಿತಿಬ್ಬೇಗೌಡ** ಅವರು ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ 2016 ರಿಂದ ಬೋಧಕ/ಬೋಧಕೇತರ ಹುದ್ದೆಗಳು ಖಾಲಿ ಇರುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

06. **ಶ್ರೀ ಅರುಣ್ ಡಿ.ಎಸ್.** ಅವರು ಭೋವಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಸೂಕ್ತ ತನಿಖೆ ನಡೆಸುವ ಕುರಿತು ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

07. **ಶ್ರೀ ಶರವಣ ಟಿ.ಎ.** ಅವರು ರಾಜ್ಯಾದ್ಯಂತ ಅದರಲ್ಲೂ ವಿಶೇಷವಾಗಿ ಬೆಂಗಳೂರಿನ ಗಿರವಿ ಅಂಗಡಿ ಹಾಗೂ ಚಿನ್ನದ ಅಂಗಡಿ ಮಾಲೀಕರಿಗೆ ರಿಕವರಿ ನೆಪದಲ್ಲಿ ಪೊಲೀಸರು ನೀಡುತ್ತಿರುವ ಕಿರುಕುಳದ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

08. **ಶ್ರೀ ಪಿ.ಆರ್. ರಮೇಶ್** ಅವರು ಬಿಬಿಎಂಪಿ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ರಾಜ್ಯದಲ್ಲಿರುವ ಖಾಸಗಿ ಶಾಲೆಗಳಲ್ಲಿ ಕೇಂದ್ರ ಪಠ್ಯ ಕ್ರಮವನ್ನು ಭೋದಿಸಲು ಶಿಕ್ಷಣ ಇಲಾಖೆಯಿಂದ ಎನ್.ಓ.ಸಿ. ಪಡೆಯಲು ಸಾಧ್ಯವಾಗದೆ ಇರುವ ಶಾಲೆಗಳ ಆಡಳಿತ ಮಂಡಳಿಯವರು ಅಕ್ರಮವಾಗಿ ನಕಲಿ ಎನ್.ಓ.ಸಿ. ಪತ್ರಗಳನ್ನು ನೀಡುತ್ತಿರುವ ಕುರಿತು ಪ್ರಸ್ತಾಪಿಸುವುದು.

..3..

೦೨. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ರಾಜ್ಯ ಸರ್ಕಾರದಿಂದ ಹಾಲು ಒಕ್ಕೂಟಗಳಿಗೆ ನೀಡಬೇಕಾಗಿರುವ ನೂರಾರು ಕೋಟಿ ಸಹಾಯಧನ ಬಿಡುಗಡೆ ಮಾಡದಿರುವುದರಿಂದ ರಾಜ್ಯದಲ್ಲಿ ಹಾಲು ಉತ್ಪಾದಕರು ಎದುರಿಸುತ್ತಿರುವ ಸಂಕಷ್ಟದ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**